# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Pavagada Farms Private. Limited ರವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 41 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ: 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1549 –P

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ: 25.11.2017 ರ ಹಂಚಿಕೆ ಸಮಿತಿ ಸಭೆ ನಡವಳಿಗಳು.

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಏಕ ಕಡತ ಪದ್ಧತಿಯಡಿಯಲ್ಲಿ M/s Pavagada Farms Private Limited ರವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಉಲ್‌ಹಟ್ಟಿ, ಸಿಗ್ಲಿ, ಶ್ಯಾಬಲ್, ಹೆಸರೂರು, ಸುರಂಗಿ, ದೊಡ್ಡೂರು, ಉಂಡೆಹಳ್ಳಿ, ದೊಡ್ಡೂರು ತಾಂಡ, ಸುರಂಗಿ ತಾಂಡ, ಹಲ್ಲೂರು ಮತ್ತು ಅಮರಾಪುರ ಗ್ರಾಮಗಳಲ್ಲಿ 41 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು 41 ಮೆ.ವ್ಯಾ ಸಾಮರ್ಥ್ಯಕ್ಕೆ ನಿಗದಿತ ಶುಲ್ಕವನ್ನು ಪಾವತಿಸಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಸ್ಥಳವು ಈಗಾಗಲೇ M/s Vish Wind Infrastructure LLP ರವರಿಗೆ ಹಂಚಿಕೆಯಾಗಿ ರದ್ದುಗೊಂಡಿರುವ ಸ್ಥಳದಲ್ಲಿರುತ್ತದೆ. M/s Pavagada Farms Private Limited ಕಂಪನಿಯ ನೆಟ್‌ವರ್ತ್ ದಿನಾಂಕ: 31.03.2017 ರ ಅಂತ್ಯಕ್ಕೆ ರೂ.80.07 ಕೋಟಿಗಳೆಂದು ಚಾರ್ಟೆಡ್ ಅಂಕೌಂಟೆಂಟ್ ದೃಢೀಕರಣ ಪತ್ರ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿರುವುದಾಗಿ ಹಾಗೂ ಸದರಿ ಕಂಪನಿಯ Registrar of Companies, Ministry of Corporate Affairs, Government of India, Chennai ಇವರಲ್ಲಿ ದಿನಾಂಕ: 11.12.2015 ರಂದು CIN ಸಂಖ್ಯೆ U01403TN2015PTC103280 ರನ್ವಯ ನೋಂದಣಿಯಾಗಿರುತ್ತದೆ. M/s Pavagada Farms Private Limited ರವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 41 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 41 MW capacity wind power project

| Sl.No | Toposheet No | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 M /12 & 48 M/8 | 41 MW (20 Nos x 2000 kw & 1 No x 1000kw) | Ulhatti, Sigli, Shyabal, Hesrur, Surangi, Doddur, Undehalli, Doddur Tanda, Surangi Tanda, Hallur & Amarapur villages of Shirahatti Taluk, Gadag District. | The proposed area is in plain land and consists of two parts i.e Part-A and Part-B.<br>Part-A: The area is surrounded by points A, B, C, D and are held in the following Geographical co-ordinates as:<br>Point A: Lat: 15°0'0''N, Long: 75°28'18.80''E<br>Point B: Lat: 15°4'59.97''N, Long: 75°28'18.80''E<br>Point C: Lat: 15°4'59.97''N, Long: 75°30'0''E<br>Point D: Lat: 15°0'0''N, Long: 75°30'0''E<br>Peaks: 574, 586, 579, 636, 622, 604, 608 and 597m AMSL. |

...2)

| | | | | |
|---|---|---|---|---|
| | | | | Part-B: The area is surrounded by points A, B, C, D and held in the following Geographical co-ordinates as:<br><br>Point A: Lat: 15°0'0''N, Long: 75°30'0''E<br>Point B: Lat: 15°5'0''N, Long: 75°30'0''E<br>Point C: Lat: 15°5'0''N, Long: 75°35'0''E<br>Point D: Lat: 15°0'0''N, Long: 75°35'0''E<br>Peaks: 570, 575, 574, 594, 600, 603, 577, 614, 582, 565, 587, 568, 586 and 601m AMSL. |
| | Total | 41 MW | | |

ಮೇಲೆ ಓದಲಾದ ಕ್ರಮ ಸಂಖ್ಯೆ: (2) ದಿನಾಂಕ: 25.11.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Pavagada Farms Private Limited ರವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಉಲ್‌ಹಟ್ಟಿ, ಸಿಗ್ಲಿ, ಶ್ಯಾಬಲ್, ಹೆಸರೂರು, ಸುರಂಗಿ, ದೊಡ್ಡೋರು, ಉಂಡೆಹಳ್ಳಿ, ದೊಡ್ಡೂರು ತಾಂಡ, ಸುರಂಗಿ ತಾಂಡ, ಹಲ್ಲೂರು ಮತ್ತು ಅಮರಾಪುರ ಗ್ರಾಮಗಳಲ್ಲಿ 41 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು 41 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಸಮಿತಿಯು ಸದರಿ ಕಂಪನಿಯವರು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳವು ಖಾಸಗಿ ಜಮೀನಾಗಿದ್ದು, ಸದರಿ ಸ್ಥಳದಲ್ಲಿ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ 41 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ : ಇಎನ್ 484 ಎನ್‌ಸಿಇ 2017, ಬೆಂಗಳೂರು, ದಿನಾಂಕ: 21.12.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Pavagada Farms Private Limited ರವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಉಲ್‌ಹಟ್ಟಿ, ಸಿಗ್ಲಿ, ಶ್ಯಾಬಲ್, ಹೆಸರೂರು, ಸುರಂಗಿ, ದೊಡ್ಡೋರು, ಉಂಡೆಹಳ್ಳಿ, ದೊಡ್ಡೂರು ತಾಂಡ, ಸುರಂಗಿ ತಾಂಡ, ಹಲ್ಲೂರು ಮತ್ತು ಅಮರಾಪುರ ಗ್ರಾಮಗಳಲ್ಲಿ 41 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು 41 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Geographical area description for 41 MW capacity wind power project

| Sl.No | Toposheet No | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 M /12 & 48 M/8 | 41 MW (20 Nos x 2000 kw & 1 No x 1000kw) | Ulhatti, Sigli, Shyabal, Hesrur, Surangi, Doddur, Undehalli, Doddur Tanda, Surangi Tanda, Hallur & Amarapur villages of Shirahatti Taluk, Gadag District. | The proposed area is in plain land and consists of two parts i.e Part-A and Part-B.<br><br>Part-A: The area is surrounded by points A, B, C, D and are held in the following Geographical co-ordinates as:<br><br>Point A: Lat: 15°0'0''N, Long: 75°28'18.80''E<br>Point B: Lat: 15°4'59.97''N, Long: 75°28'18.80''E<br>Point C: Lat: 15°4'59.97''N, Long: 75°30'0''E<br>Point D: Lat: 15°0'0''N, Long: 75°30'0''E<br>Peaks: 574, 586, 579, 636, 622, 604, 608 and 597m AMSL. |

...3)

| | | | | |
|---|---|---|---|---|
| | | | | Part-B: The area is surrounded by points A, B, C, D and held in the following Geographical co-ordinates as:<br><br>Point A: Lat: 15°0'0''N, Long: 75°30'0''E<br>Point B: Lat: 15°5'0''N, Long: 75°30'0''E<br>Point C: Lat: 15°5'0''N, Long: 75°35'0''E<br>Point D: Lat: 15°0'0''N, Long: 75°35'0''E<br>Peaks: 570, 575, 574, 594, 600, 603, 577, 614, 582, 565, 587, 568, 586 and 601m AMSL. |
| | Total | 41 MW | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಮತ್ತು ಕೆ.ಇ.ಆರ್.ಸಿ ರವರು ಅನುಮೋದಿಸಿ ಚಾಲ್ತಿಯಲ್ಲಿರುವ ದರದಲ್ಲಿ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಸರ್ಕಾರದ ಆದೇಶ ಸಂಖ್ಯೆ : ಇಎನ್ 93 ವಿಎಸ್‌ಇ 2017 ದಿನಾಂಕ : 27.10.2017 ರಲ್ಲಿನ ಅಂಶಗಳನ್ನು ಅನುಸರಿಸುವ ಷರತ್ತುಗಳಿಗೊಳಪಟ್ಟು ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

...4)